# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2408 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಮಂಜುನಾಥ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 22.03.2022 |
| ಉತ್ತರಿಸುವವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಬುದ್ಧಿಮಾಂದ್ಯ ವಿಕಲಚೇತನ ವ್ಯಕ್ತಿಗಳಿಗೆ ಸರ್ಕಾರದಿಂದ ನೀಡಲಾಗುತ್ತಿರುವ ಸವಲತ್ತುಗಳು ಯಾವುವು; ಅವುಗಳ ಅರ್ಹತೆಗಳೇನು; | ಬುದ್ಧಿಮಾಂದ್ಯ ವಿಕಲಚೇತನ ವ್ಯಕ್ತಿಗಳಿಗೆ ಇಲಾಖೆಯಿಂದ ನೀಡುತ್ತಿರುವ ಸೌಲಭ್ಯಗಳ ವಿವರ **ಅನುಬಂಧ-01ರಲ್ಲಿ** ಒದಗಿಸಲಾಗಿದೆ. ಅವುಗಳ ಅರ್ಹತೆಗಳನ್ನು **ಅನುಬಂಧ-02ರಲ್ಲಿ** ಒದಗಿಸಲಾಗಿದೆ. |
| ಆ. | ಬುದ್ಧಿಮಾಂದ್ಯತೆರೆ ಹೊಂದಿರುವ ವ್ಯಕ್ತಿಗಳಿಗೆ ವರಮಾನ ಪ್ರಮಾಣ ಪತ್ರವನ್ನು ಕಡ್ಡಾಯ ಪಡಿಸಲಾಗಿದೆಯೇ; ಪರರ ಮೇಲೆ ಅವಲಂಬಿತ ಹಾಗೂ ಸಂಪೂರ್ಣ ಅಸಹಾಯಕರಾಗಿರುವ ಈ ವ್ಯಕ್ತಿಗಳಿಗೆ ಆದಾಯ ಪ್ರಮಾಣ ಪತ್ರದಿಂದ ರಿಯಾಯಿತಿ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು; | ಬುದ್ಧಿಮಾಂದ್ಯತೆ ಹೊಂದಿರುವ ವ್ಯಕ್ತಿಗಳಿಗೆ ಯೋಜನೆಯ ಮಾರ್ಗಸೂಚಿಯಲ್ಲಿ ನಿಗಧಿ ಪಡಿಸಿದ ವರಮಾನ ಪ್ರಮಾಣ ಪತ್ರವನ್ನು ಪಡೆಯಲಾಗುತ್ತಿದೆ.<br>ಪರರ ಮೇಲೆ ಅವಲಂಬಿತ ಹಾಗೂ ಸಂಪೂರ್ಣ ಅಸಹಾಯಕರಾಗಿರುವ ಈ ವ್ಯಕ್ತಿಗಳಿಗೆ ಆದಾಯ ಪ್ರಮಾಣ ಪತ್ರದಿಂದ ರಿಯಾಯಿತಿ ನೀಡಲು ಯಾವುದೇ ಪ್ರಸ್ತಾವನೆಗಳು ಸ್ವೀಕೃತವಾಗಿರುವುದಿಲ್ಲ. |
| ಇ. | ಈ ವ್ಯಕ್ತಿಗಳ ಆರೈಕೆ ಮಾಡುತ್ತಿರುವ ಪೋಷಕರಿಗೆ ಶುಶ್ರೂಷೆ ಭತ್ಯೆಯನ್ನು / ಸಹಾಯಧನ ನೀಡುವ ಬಗ್ಗೆ ಸರ್ಕಾರದ ಕೈಗೊಂಡ ಕ್ರಮಗಳೇನು? | ಬುದ್ಧಿಮಾಂದ್ಯ ವ್ಯಕ್ತಿಗಳ ಆರೈಕೆ ಮಾಡುತ್ತಿರುವ ಪೋಷಕರಿಗೆ ಶುಶ್ರೂಷೆ ಭತ್ಯೆಯನ್ನು / ಸಹಾಯಧನ ನೀಡುವ ಬಗ್ಗೆ ಸರ್ಕಾರದಲ್ಲಿ ಯಾವುದೇ ಪ್ರಸ್ತಾವನೆಗಳು ಸ್ವೀಕೃತವಾಗಿರುವುದಿಲ್ಲ. |

**ಸಂಖ್ಯೆ: ಮಮಇ 91 ಪಿಹೆಚ್‌ಪಿ 2022**

Halappa B

(ಆಚಾರ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ ಹಾಗೂ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ
ಇಲಾಖೆ ಸಚಿವರು

# ಅನುಬಂಧ-01

1. **ಯುಡಿಐಡಿ ಕಾರ್ಡ್**– (UNIQUE DISABILITY ID) ನೀಡುವ ಯೋಜನೆಯು ಕೇಂದ್ರ ಸರ್ಕಾರ ಪ್ರಾಯೋಜಿತ ಯೋಜನೆಯಾಗಿದೆ. ರಾಜ್ಯ ಸರ್ಕಾರದಿಂದ ನೇಮಿಸಲಾಗುವ ವೈದ್ಯಕೀಯ ಪ್ರಾಧಿಕಾರಗಳಿಂದ ದೃಢೀಕರಿಸಲಾಗುವ ವೈದ್ಯಕೀಯ ಪ್ರಮಾಣ ಪತ್ರದ ಸಮಗ್ರ ಮಾಹಿತಿಯುಳ್ಳ ಗಣಕೀಕೃತ ಗುರುತಿನ ಚೀಟಿಯನ್ನು ವಿಕಲಚೇತನ ವ್ಯಕ್ತಿಗಳಿಗೆ ನೀಡುವ ವ್ಯವಸ್ಥೆಯಾಗಿದ್ದು, ಇದರಲ್ಲಿ ವಿಕಲಚೇತನ ವ್ಯಕ್ತಿಯ ವಿವರಗಳು ಹಾಗೂ ಅವರಲ್ಲಿರುವ ವಿಕಲತೆಯ ವಿವರ ಮತ್ತು ಪ್ರಮಾಣವನ್ನು ನಮೂದಿಸಲಾಗಿರುತ್ತದೆ.

2. **ಮಾಸಿಕ ನಿರ್ವಹಣಾ ಭತ್ಯೆ**– ಗ್ರಾಮೀಣ ಪ್ರದೇಶದಲ್ಲಿ ರೂ.12,000/– ಹಾಗೂ ನಗರ ಪ್ರದೇಶದಲ್ಲಿ ರೂ.17,000/– ಕ್ಕಿಂತಲೂ ಕಡಿಮೆ ವಾರ್ಷಿಕ ಆದಾಯವಿರುವ ಕುಟುಂಬದಲ್ಲಿರುವ ಶೇ75ರಷ್ಟು ಹೆಚ್ಚು ಅಂಗವಿಕಲತೆ ಹೊಂದಿರುವ ಮನೋವೈಕಲ್ಯತೆ ಹೊಂದಿದವರಿಗೆ ಮಾಹೆಯಾನ ರೂ.2,000/–ಗಳ ಪೋಷಣಾ ಭತ್ಯೆಯನ್ನು ನೀಡಲಾಗುತ್ತಿದೆ. ಸಾಮಾಜಿಕ ಭದ್ರತೆ ಹಾಗೂ ಪಿಂಚಣಿ ನಿರ್ದೇಶನಾಲಯದ ಮುಖಾಂತರ ಸಂಬಂಧಿಸಿದ ತಾಲ್ಲೂಕಿನ ತಹಸೀಲ್ದಾರ್‌ರವರು ಪೋಷಣಾ ಭತ್ಯೆಯನ್ನು ಮಂಜೂರು ಮಾಡುವ ಅಧಿಕಾರವನ್ನು ಹೊಂದಿರುತ್ತಾರೆ.

3. **ಸಾಧನ ಸಲಕರಣೆಗಳು (ಎಂ.ಆರ್ ಕಿಟ್)**– ಈ ಯೋಜನೆಯಡಿಯಲ್ಲಿ ಅಂಗವಿಕಲರಿಗೆ ಅವಶ್ಯವಾಗಿರುವ ಸಾಧನ ಸಲಕರಣೆಗಳನ್ನು ನೀಡ ಲಾಗುತ್ತಿದೆ. ಫಲಾನುಭವಿಯ ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ಗ್ರಾಮೀಣ ಪ್ರದೇಶದ ಫಲಾನುಭವಿಗಳಿಗೆ ರೂ.11,500/– ಮತ್ತು ನಗರ ಪ್ರದೇಶದ ಫಲಾನುಭವಿಗಳಿಗೆ ರೂ.24,000/– ನಿಗದಿಗೊಳಿಸಲಾಗಿದೆ. ಈ ಯೋಜನೆಯಡಿ ರೂ.15,000/–ಗಳ ಮಿತಿಯೊಳಗೆ ವಿಕಲಚೇತನರಿಗೆ ಅವಶ್ಯವಿರುವ ಗಾಲಿ ಕುರ್ಚಿ, ಸಾದಾ ತ್ರಿಚಕ್ರವಾಹನ, ಕ್ಯಾಲಿಪರ್ಸ್, ಕ್ರಚಸ್, ಶ್ರವಣ ಸಾಧನ, ವೈಟ್ ಕೇನ್, ಬ್ರೈಲ್ ವಾಚ್ ಇನ್ನಿತರ ಸಲಕರಣೆಗಳನ್ನು ಉಚಿತವಾಗಿ ನೀಡಲಾಗುತ್ತಿದೆ.

4. **ವಿವಾಹ ಪ್ರೋತ್ಸಾಹಧನ**–ವಿಕಲಚೇತನ ಯುವಕ/ಯುವತಿಯರನ್ನು ವಿವಾಹವಾಗುವ ಸಾಮಾನ್ಯ ಯುವಕ/ ಯುವತಿಯರಿಗೆ ನಿರಂತರವಾಗಿ ಮಾಸಿಕ ಆದಾಯ ದೊರಕಿಸಲು ವಿಕಲಚೇತನ ವ್ಯಕ್ತಿಯ ಹೆಸರಿನಲ್ಲಿ ರೂ.50,000/–ಗಳನ್ನು ಮದುವೆಯಾದ ಸಾಮಾನ್ಯ ವ್ಯಕ್ತಿ ಹಾಗೂ ವಿಕಲಚೇತನರ ಜಂಟಿ ಹೆಸರಿನಲ್ಲಿ 05 ವರ್ಷದ ಅವಧಿಗೆ ಹೂಡಿಕೆಯ ರೂಪದಲ್ಲಿ ನೀಡಿ ಪ್ರೋತ್ಸಾಹ ನೀಡಲು ಹಾಗೂ ಅದರಿಂದ ಬರುವ ಬಡ್ಡಿ ಹಣವನ್ನು ಉಪಯೋಗಿಸುವುದು ಹಾಗೂ 05 ವರ್ಷಗಳ ನಂತರ ಠೇವಣಿ ಮೊತ್ತವನ್ನು ವಾಪಸ್ಸು ಪಡೆಯಬಹುದು ಅಥವಾ ಮುಂದುವರೆಸಲು ಅವಕಾಶವಿರುತ್ತದೆ.

5. **ಸಾಧನೆ ಪ್ರತಿಭೆ**–ವಿಕಲಚೇತನ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡಲು "ಸಾಧನೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ಕ್ರೀಡೆಗಳಲ್ಲಿ ವಿಶೇಷ ಸಾಧನೆಗೈದ ವಿಕಲಚೇತನರಿಗೆ ರೂ.50,000/–ಗಳ ಧನ ಸಹಾಯವನ್ನು ನೀಡಲಾಗುತ್ತಿದೆ.

   ವಿಕಲಚೇತನರು ನೀಡುವ ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡುವ ಸಲುವಾಗಿ "ಪ್ರತಿಭೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ವೈಯಕ್ತಿಕ ಸಾಂಸ್ಕೃತಿಕ ರೂ.2,000/–ಗಳು ಹಾಗೂ ಸಮೂಹ ಕಾರ್ಯಕ್ರಮಕ್ಕೆ ರೂ.10,000/–ಗಳ ಪ್ರೋತ್ಸಾಹಧನ ನೀಡಲಾಗುತ್ತದೆ.

6. **ಬುದ್ಧಿಮಾಂದ್ಯ ವ್ಯಕ್ತಿಗಳ ತಂದೆ ತಾಯಿ / ಪೋಷಕರ ವಿಮಾ ಯೋಜನೆ**–ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ: ತಾಯಿ: ಪೋಷಕರ ವಿಮಾ ಯೋಜನೆಯನ್ನು ಭಾರತೀಯ ಜೀವ ವಿಮಾ ನಿಗಮದ ಮೂಲಕ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ:ತಾಯಿ: ಪೋಷಕರು ಮರಣ ಹೊಂದಿದ ನಂತರ ಬುದ್ಧಿಮಾಂದ್ಯ ಮಕ್ಕಳ ಜೀವನ ನಿರ್ವಹಣೆಗಾಗಿ ರೂ.20,000/–ಗಳ ಪರಿಹಾರ ಧನವನ್ನು ಕುಟುಂಬದ ನಾಮ ನಿರ್ದೇಶಿತ ಸದಸ್ಯರಿಗೆ ಪಾವತಿಸಲಾಗುತ್ತಿದೆ.

7. **ನಿರಾಮಯ**-ಬುದ್ಧಿಮಾಂದ್ಯ, ಸೆರಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲತೆ ಹೊಂದಿರುವ ಪ್ರತಿ ವ್ಯಕ್ತಿ ಹಾಗೂ ಮಗುವಿಗೆ ವರ್ಷಕ್ಕೆ ನಿರಾಮಯ ಆರೋಗ್ಯ ಯೋಜನೆಯಡಿ ಒಂದು ಬಾರಿ ಪ್ರೀಮಿಯಂ ಮೊತ್ತ ರೂ.250/-ಗಳನ್ನು ಭಾರತ ಸರ್ಕಾರದಿಂದ ಗುರುತಿಸಲ್ಪಟ್ಟ ಅಧಿಕೃತ ಸಂಸ್ಥೆಯಾದ ಅಂಗವಿಕಲರ ಪುನಶ್ಚೇತನ ಸಂಸ್ಥೆ (ರಿ) (ಎ.ಪಿ.ಡಿ) ಬೆಂಗಳೂರು ರವರಿಗೆ ಪಾವತಿಸಲಾಗುವುದು. ಪ್ರತಿ ವರ್ಷ ಯೋಜನೆಯಡಿ ಬರುವ ಫಲಾನುಭವಿಗಳು ರೂ.1.00 ಲಕ್ಷಗಳವರೆಗೆ ವೈದ್ಯಕೀಯ ಸೌಲಭ್ಯ ಪಡೆಯಬಹುದಾಗಿರುತ್ತದೆ. ಈ ಮೊತ್ತದಲ್ಲಿ ರೂ.60,000/-ಗಳವರೆಗೆ ಸರ್ಜರಿ ವೆಚ್ಚ ಉಳಿದ ರೂ.40,000/-ಗಳಲ್ಲಿ ವೈದ್ಯಕೀಯ ಖರ್ಚು ಥೆರಪಿ, ಪ್ರಯಾಣ ವೆಚ್ಚಗಳನ್ನು ಒಳಗೊಂಡಿರುತ್ತದೆ.

8. **ಸಮಾಜಸೇವಾ ಸಂಕೀರ್ಣ**- ನಿರ್ಗತಿಕ ಬುದ್ಧಿಮಾಂದ್ಯ ಪುರುಷರಿಗಾಗಿ ಸಮಾಜ ಸೇವಾ ಸಂಕೀರ್ಣ ಸಂಸ್ಥೆಯು ಬೆಂಗಳೂರಿನಲ್ಲಿ ಸರ್ಕಾರದ ವತಿಯಿಂದ ನಡೆಯುತ್ತಿದ್ದು, ಈ ಸಂಸ್ಥೆಯಲ್ಲಿ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ, ಸಂರಕ್ಷಣೆ ಒದಗಿಸಲಾಗುತ್ತಿದೆ. ಪ್ರಸ್ತುತ ಸಂಸ್ಥೆಯಲ್ಲಿ 80 ನಿವಾಸಿಗಳು ದಾಖಲಾಗಿರುತ್ತಾರೆ.

9. **ಮಂದಮತಿ ಅನುಪಾಲನಾ ಗೃಹ**-18 ವರ್ಷ ಮೇಲ್ಪಟ್ಟ ನಿರ್ಗತಿಕ ಮಹಿಳಾ ಬುದ್ಧಿಮಾಂದ್ಯರಿಗೆ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ ಮತ್ತು ಸಂರಕ್ಷಣೆ ಒದಗಿಸುವ ಉದ್ದೇಶದಿಂದ ಮಂದಮತಿ ಮಹಿಳೆಯರ ಅನುಪಾಲನಾ ಗೃಹಗಳನ್ನು ಬೆಂಗಳೂರು ನಗರ ಹಾಗೂ ಹುಬ್ಬಳ್ಳಿಯಲ್ಲಿ ಇಲಾಖಾವತಿಯಿಂದ ನಡೆಸಲಾಗುತ್ತಿದೆ. ಪ್ರಸ್ತುತ ಬೆಂಗಳೂರು ಅನುಪಾಲನಾ ಕೇಂದ್ರದಲ್ಲಿ 100 ಮಂದಿ ಹಾಗೂ ಹುಬ್ಬಳ್ಳಿ ಅನುಪಾಲನ ಕೇಂದ್ರದಲ್ಲಿ 70 ನಿವಾಸಿಗಳು ದಾಖಲಾಗಿರುತ್ತಾರೆ.

10. **1982ರ ರಾಜ್ಯ ಅನುದಾನ ಸಂಹಿತೆ**ಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 34 ವಿಶೇಷ ಶಾಲೆ/ ತರಬೇತಿ ಕೇಂದ್ರಗಳನ್ನು ದೈಹಿಕ, ಅಂಧ, ಶ್ರವಣದೋಷ ಹಾಗೂ ಬುದ್ಧಿಮಾಂದ್ಯ ಮಕ್ಕಳಿಗಾಗಿ ನಡೆಸಲಾಗುತ್ತಿದೆ.ರಾಜ್ಯ ಸರ್ಕಾರದಿಂದ ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಬಿಡುಗಡೆ ಮಾಡಲಾಗುತ್ತಿದೆ.

11. **ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ ನಡೆಯುತ್ತಿರುವ ವಿಶೇಷ ಶಾಲೆಗಳು:** ಈ ಯೋಜನೆಯಡಿ ಬುದ್ಧಿಮಾಂದ್ಯ (ಸೆರಬ್ರಲ್ ಪಾಲ್ಸಿ, ಆಟಿಸಂ), ದೃಷ್ಟಿದೋಷ, ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಹಾಗೂ ವಸತಿರಹಿತ ಶಾಲೆಗಳು ಸೇರಿದಂತೆ ಒಟ್ಟು 141 ವಿಶೇಷ ಶಾಲೆಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿವೆ. ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶ್ರವಣದೋಷವುಳ್ಳ ಹಾಗೂ ದೃಷ್ಟಿದೋಷವುಳ್ಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.6200/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.5200/- ರಂತೆ ಹಾಗೂ ಬುದ್ಧಿಮಾಂದ್ಯ ಮಕ್ಕಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.6800/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ. 6000/- ರಂತೆ ವರ್ಷದಲ್ಲಿ 10 ತಿಂಗಳ ಅವಧಿಗೆ ಅನುದಾನವನ್ನು ಮಂಜೂರು ಮಾಡಲಾಗುತ್ತಿದೆ.ಈ ಅನುದಾನದಲ್ಲಿ ಶಿಕ್ಷಕರ ಗೌರವಧನ, ಮಕ್ಕಳ ಆಹಾರ ವೆಚ್ಚ, ಕಟ್ಟಡದ ಬಾಡಿಗೆ ಹಾಗೂ ನಿರ್ವಹಣಾ ವೆಚ್ಚ, ಸಮವಸ್ತ್ರ, ವೈದ್ಯಕೀಯ ವೆಚ್ಚ ಹಾಗೂ ಸಾದಿಲ್ವಾರು ವೆಚ್ಚಗಳು ಒಳಗೊಂಡಿರುತ್ತವೆ.

ಕೇಂದ್ರ ಸರ್ಕಾರದ ದೀನ್‌ದಯಾಳ್ ಪುನರ್ವಸತಿ ಯೋಜನೆಯಡಿ 8 ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವಿಶೇಷ ಶಾಲೆ /ವೃತ್ತಿ ತರಬೇತಿ ಕೇಂದ್ರಗಳು ನಡೆಯುತ್ತಿದ್ದು, ಸದರಿ ಶಾಲೆ ಹಾಗೂ ತರಬೇತಿ

ಕೇಂದ್ರಗಳಿಗೆ ಕೇಂದ್ರ ಸರ್ಕಾರದಿಂದ ಶೇ.90ರಷ್ಟು ಅನುದಾನವನ್ನು ಮಂಜೂರು ಮಾಡಲಾಗುತ್ತಿದ್ದು, ಉಳಿದ ಶೇ.10ರಷ್ಟು ವೆಚ್ಚವನ್ನು ಸಂಸ್ಥೆಯವರು ಭರಿಸಬೇಕಾಗಿರುತ್ತದೆ.

12. **ಮಾನಸಿಕ ಅಸ್ವಸ್ಥರ, ಸೆರಬ್ರಲ್ ಪಾಲ್ಸಿ, ಆಟಿಸಂ ಮಕ್ಕಳ ಹಗಲು ಯೋಗಕ್ಷೇಮ ಕೇಂದ್ರಗಳು–** ಸೆರಬ್ರಲ್ ಪಾಲ್ಸಿ, ಆಟಿಸಂ, ಮಾನಸಿಕ ಅಸ್ವಸ್ಥ ಹಾಗೂ ತೀವ್ರತರದ ಅಂಗವೈಕಲ್ಯತೆ ಹೊಂದಿರುವ ಮೂರರಿಂದ 25 ವರ್ಷದ ಒಳಗಿನ ಮಕ್ಕಳಿಗಾಗಿ 02 ಹಗಲು ಯೋಗಕ್ಷೇಮ ಕೇಂದ್ರಗಳನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸುತ್ತಿದ್ದು, ಪ್ರತಿ ಕೇಂದ್ರದಲ್ಲಿ 25 ಮಕ್ಕಳನ್ನು ದಾಖಲಿಸಲು ಅವಕಾಶವಿದ್ದು, ಪ್ರತಿ ಮಗುವಿಗೆ ಮಾಸಿಕ ರೂ.10,000/-ಗಳಂತೆ ವಾರ್ಷಿಕ 25.00 ಲಕ್ಷಗಳನ್ನು ಮಂಜೂರು ಮಾಡಲಾಗುತ್ತಿದೆ.

13. **ಮಾನಸ ಕೇಂದ್ರಗಳು–** ಮಾನಸಿಕ ಅಸ್ವಸ್ಥರಿಗಾಗಿ ಮಾನಸ ಕೇಂದ್ರಗಳನ್ನು ಬೆಂಗಳೂರು ನಗರ ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ನಡೆಸುತ್ತಿದ್ದು, ರಾಜ್ಯ ಉಚ್ಚ ನ್ಯಾಯಾಲಯ ಮತ್ತು ಅಧೀನ ನ್ಯಾಯಾಲಯಗಳಿಂದ ಆದೇಶಿಸಲ್ಪಡುವ ಮಾನಸಿಕ ಅಸ್ವಸ್ಥರನ್ನು ಹಾಗೂ ರಸ್ತೆಗಳಲ್ಲಿ ಓಡಾಡುವ ನಿರ್ಗತಿಕ ಮಾನಸಿಕ ಅಸ್ವಸ್ಥರನ್ನು ಈ ಕೇಂದ್ರಗಳಲ್ಲಿ ನಿರ್ದಿಷ್ಟ ವೈದ್ಯಕೀಯ ಪ್ರಾಧಿಕಾರದ ಆದೇಶದ ಮೇರೆಗೆ ದಾಖಲಿಸಲು ಅವಕಾಶವಿರುತ್ತದೆ. ಈ ಕೇಂದ್ರಗಳಲ್ಲಿ ಫಲಾನುಭವಿಗಳಿಗೆ ಉಚಿತ ಊಟ, ವಸತಿ, ವೈದ್ಯಕೀಯ ಶುಶ್ರೂಷೆ, ವೈದ್ಯಕೀಯ ಸಲಹೆ (ಕೌನ್ಸಲಿಂಗ್) ಸೌಲಭ್ಯವನ್ನು ನೀಡಲಾಗುತ್ತಿದ್ದು, ಇವು ಅಲ್ಪಾವಧಿ ಕೇಂದ್ರಗಳಾಗಿರುತ್ತವೆ.

14. **ವೈದ್ಯಕೀಯ ಪರಿಹಾರ ನಿಧಿ–** ಅಂಗವಿಕಲ್ಯತೆಯ ಪ್ರಮಾಣವನ್ನು ಕಡಿಮೆ ಮಾಡಿಕೊಳ್ಳಲು ಅಥವಾ ನಿವಾರಿಸುವ ಸಲುವಾಗಿ ಶಸ್ತ್ರಚಿಕಿತ್ಸೆಗೆ ಒಳಗಾಗುವ ವಿಕಲಚೇತನ ವ್ಯಕ್ತಿಗೆ ಶಸ್ತ್ರಚಿಕಿತ್ಸೆ/ಔಷಧಿ/ವೈದ್ಯಕೀಯ ಪರೀಕ್ಷೆ/ಬೆಡ್‌ಚಾರ್ಜ್‌ಗಳ ವೆಚ್ಚವನ್ನು ಭರಿಸಲು ಗರಿಷ್ಠ ರೂ.1.00 ಲಕ್ಷಗಳವರೆಗೆ ಅನುದಾನವನ್ನು ಶಸ್ತ್ರಚಿಕಿತ್ಸೆಗೆ ಒಳಗಾದ ನಂತರ ವೈದ್ಯರ ಶಿಫಾರಸ್ಸಿನ ಮೇಲೆ ಮರುಪಾವತಿಸಲಾಗುವುದು. ಈ ಸೌಲಭ್ಯವನ್ನು ರಾಜ್ಯದ ಎಲ್ಲಾ ಸರ್ಕಾರಿ ಆಸ್ಪತ್ರೆ, ಸುಸಜ್ಜಿತ ಖಾಸಗಿ ಆಸ್ಪತ್ರೆಗಳ ಅಥವಾ ಸಂಜಯಗಾಂಧಿ ಆಸ್ಪತ್ರೆ, ಬೆಂಗಳೂರು ಮುಖಾಂತರ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಯೋಜನೆಯು ದಿನಾಂಕ:01-04-2000ದಿಂದ ಜಾರಿಯಲ್ಲಿರುತ್ತದೆ.

# ಅನುಬಂಧ-02

| ಕ್ರಸಂ. | ಯೋಜನೆಯ ಹೆಸರು ಮತ್ತು ಯೋಜನೆಯ ವಿವರ | ಮಾನದಂಡಗಳು |
|---|---|---|
| 1 | **ಯುಡಿಐಡಿ ಕಾರ್ಡ್(UNIQUE DISABILITY ID)**<br>ಯು.ಡಿ.ಐ.ಡಿ ಕಾರ್ಡ್ ವಿಕಲಚೇತನ ವ್ಯಕ್ತಿಗಳ ಗುರುತಿನ ಏಕೈಕ ದಾಖಲೆಯಾಗಿದ್ದು, ಯು.ಡಿ.ಐ.ಡಿ ಕಾರ್ಡ್ ಭಾರತದಾದ್ಯಂತ ವಿಕಲಚೇತನ ವ್ಯಕ್ತಿಗಳ ಅಂಗವೈಕಲ್ಯತೆ ಪುರಾವೆಯಾಗಿ ಪರಿಗಣಿಸಲಾಗುತ್ತದೆ.ವಿಕಲಚೇತನರಿಗೆ ಸರ್ಕಾರದ ವಿವಿಧ ಯೋಜನೆಗಳಾದ ವಿದ್ಯಾರ್ಥಿ ವೇತನ, ಕೌಶಲ್ಯ ತರಬೇತಿ, ಸಮನ್ವಯ ಶಿಕ್ಷಣ, ಪುನರ್ವಸತಿ ಯೋಜನೆ, ಪಿಂಚಣಿ, ರೈಲ್ವೆ ರಿಯಾಯಿತಿ ಮುಂತಾದ ಸೌಲಭ್ಯಗಳನ್ನು ಪಡೆಯಬಹುದಾಗಿದ್ದು, ಯು.ಡಿ.ಐ.ಡಿ ಕಾರ್ಡಿನ ಸಹಾಯದಿಂದ ಎಲ್ಲಾ ಹಂತಗಳಲ್ಲಿ ವಿಕಲಚೇತನರಿಗೆ ಒದಗಿಸಲಾಗುವ ಸೌಲಭ್ಯಗಳ ಆರ್ಥಿಕ ಹಾಗೂ ಭೌತಿಕ ಪ್ರಗತಿಯನ್ನು ಗುರುತಿಸಲು ಸಹಾಯಕಾರಿಯಾಗಿರುತ್ತದೆ ಹಾಗೂ ಸ್ಮಾರ್ಟ್ ಕಾರ್ಡ್ ರೂಪದಲ್ಲಿ ಗುರುತಿನ ಚೀಟಿಯನ್ನು ನೀಡುವುದರಿಂದ ನಿರ್ವಹಣೆ ಸುಲಭವಾಗಿರುತ್ತದೆ. | 1. ಶೇ.40ಕ್ಕಿಂತ ಮೇಲ್ಪಟ್ಟು ಅಂಗವಿಕಲತೆಗೆ ಹೊಂದಿರುವ ವಿಕಲಚೇತನರಿಗೆ ಮಾತ್ರ ಗುರುತಿನ ಚೀಟಿ(ವೈದ್ಯಕೀಯ ಪ್ರಮಾಣ ಪತ್ರ) ನೀಡಲಾಗುವುದು.<br>2. ಗುರುತಿನ ಚೀಟಿ ನೀಡುವಿಕೆ ಯೋಜನೆಯನ್ನು ಸಕಾಲ ಯೋಜನಾ ವ್ಯಾಪ್ತಿಗೊಳಪಡಿಸಿದ್ದು, ಅರ್ಜಿ ಸಲ್ಲಿಸಿದ 21 ದಿನಗಳೊಳಗಾಗಿ ಗುರುತಿನ ಚೀಟಿ ವಿತರಿಸಲಾಗುವುದು.<br>3. ಯು.ಡಿ.ಐ.ಡಿ ಕಾರ್ಡ್‌ನ ಮೂಲ ಪ್ರತಿಯನ್ನು ಪೋಸ್ಟ್ ಮೂಲಕ ವಿಕಲಚೇತನರಿಗೆ ತಲುಪಿಸಲಾಗುತ್ತದೆ. |
| 2 | **ಮಾಸಿಕ ನಿರ್ವಹಣಾ ಭತ್ಯೆ** ಗ್ರಾಮೀಣ ಪ್ರದೇಶದಲ್ಲಿ ರೂ.12,000/- ಹಾಗೂ ನಗರ ಪ್ರದೇಶದಲ್ಲಿ ರೂ.17,000/- ಕ್ಕಿಂತಲೂ ಕಡಿಮೆ ವಾರ್ಷಿಕ ಆದಾಯವಿರುವ ಕುಟುಂಬದಲ್ಲಿರುವ ಶೇ75ರಷ್ಟು ಹೆಚ್ಚು ಅಂಗವಿಕಲತೆ ಹೊಂದಿರುವ ಮನೋವೈಕಲ್ಯತೆ ಹೊಂದಿದವರಿಗೆ ಮಾಹೆಯಾನ ರೂ.2,000/-ಗಳ ಪೋಷಣಾ ಭತ್ಯೆಯನ್ನು ನೀಡಲಾಗುತ್ತಿದೆ. ಸಾಮಾಜಿಕ ಭದ್ರತೆ ಹಾಗೂ ಪಿಂಚಣಿ ನಿರ್ದೇಶನಾಲಯದ ಮುಖಾಂತರ ಸಂಬಂಧಿಸಿದ ತಾಲ್ಲೂಕಿನ ತಹಸೀಲ್ದಾರ್‌ರವರು ಪೋಷಣಾ ಭತ್ಯೆಯನ್ನು ಮಂಜೂರು ಮಾಡುವ ಅಧಿಕಾರವನ್ನು ಹೊಂದಿರುತ್ತಾರೆ. | 4. ವ್ಯಕ್ತಿಯ ಕುಟುಂಬದ ವಾರ್ಷಿಕ ಆದಾಯ ಗ್ರಾಮೀಣ ಪ್ರದೇಶದಲ್ಲಿ ರೂ.12,000/- ಹಾಗೂ ನಗರ ಪ್ರದೇಶದಲ್ಲಿ ರೂ.17,000/- ಕ್ಕಿಂತಲೂ ಕಡಿಮೆ ಇರಬೇಕು.<br>5. ವ್ಯಕ್ತಿಯು ಸತತವಾಗಿ ಕರ್ನಾಟಕ ರಾಜ್ಯದಲ್ಲಿ 05 ವರ್ಷಗಳು ವಾಸಿಸಿರಬೇಕು.<br>6. ಸರ್ಕಾರದ ವತಿಯಿಂದ ವೃದ್ಧಾಪ್ಯ ವೇತನ ಒಳಗೊಂಡಂತೆ ಇತರೆ ಯಾವುದೇ ಪಿಂಚಣಿ ಸೌಲಭ್ಯ ಪಡೆಯದ ಅಭ್ಯರ್ಥಿಗಳಾಗಿರಬೇಕು.<br>7. ಸಂಬಂಧಪಟ್ಟ ತಹಸೀಲ್ದಾರ್‌ರವರಿಂದ ಪಡೆದ ಕುಟುಂಬ ವಾರ್ಷಿಕ ಆದಾಯ ಪ್ರಮಾಣ ಪತ್ರ ಒದಗಿಸಬೇಕು.<br>8. ವೈದ್ಯಕೀಯ ಪ್ರಾಧಿಕಾರದವರು ನಿಗದಿಪಡಿಸಿದಂತೆ ತಜ್ಞ ವೈದ್ಯಾಧಿಕಾರಿಗಳಿಂದ ಪಡೆದ ಅಂಗವಿಕಲತೆ ಪ್ರಮಾಣ ಪತ್ರವನ್ನು ಒದಗಿಸಬೇಕು. |
| 3 | **ಸಾಧನ ಸಲಕರಣೆಗಳು**<br>ಅಂಗವಿಕಲರ ದೈನಂದಿನ ಚಟುವಟಿಕೆಗಳಿಗೆ ಅಗತ್ಯವಾಗಿರುವ ತ್ರಿಚಕ್ರವಾಹನಗಳು, ಶ್ರವಣ ಸಾಧನಗಳು, ಕೃತಕ ಅಂಗಾಂಗಗಳು, ಬ್ರೈಲ್ ಗಡಿಯಾರಗಳು, ದೃಷ್ಟಿದೋಷ ವುಳ್ಳವರು ಉಪಯೋಗಿಸುವ ಬಿಳಿ ಕೋಲುಗಳನ್ನು ಉಚಿತವಾಗಿ ವಿತರಿಸುವುದು. | 1. ಅಂಗವಿಕಲ ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿ 10 ವರ್ಷಗಳಿಂದ ವಾಸ ಮಾಡುತ್ತಿರುವ ಬಗ್ಗೆ ತಹಸೀಲ್ದಾರ್ ರವರಿಂದ ಪಡೆದ ದೃಢೀಕರಣ ಅಥವಾ ಕರ್ನಾಟಕದಲ್ಲಿ 10 ವರ್ಷಗಳಿಂದ ವ್ಯಾಸಂಗ ಮಾಡಿದ ವಿದ್ಯಾಭ್ಯಾಸದ ದೃಢೀಕರಣ ಪತ್ರ ಒದಗಿಸಬೇಕು.<br>2. ಅಂಗವಿಕಲತೆ ಹೊಂದಿರುವ ಬಗ್ಗೆ ಸಂಬಂಧಪಟ್ಟ ವೈದ್ಯಕೀಯ ಮಂಡಳಿಯಿಂದ ಪಡೆದ ದೃಢೀಕರಣ ಒದಗಿಸಬೇಕು.<br>3. ಅಂಗವಿಕಲ ಅಭ್ಯರ್ಥಿಯು ಕುಟುಂಬದ ವಾರ್ಷಿಕ ಆದಾಯ ನಗರ ವಾಸಿಯಾಗಿದ್ದಲ್ಲಿ ರೂ.24,000 ಮತ್ತು ಗ್ರಾಮೀಣ ವಾಸಿಯಾಗಿದ್ದಲ್ಲಿ ರೂ. 11,500 ಮೀರಿರಬಾರದು.<br>4. ಈ ಹಿಂದೆ ಸರ್ಕಾರದವತಿಯಿಂದಾಗಲಿ ಅಥವಾ ಸಂಘ ಸಂಸ್ಥೆಗಳಿಂದಾಗಲೀ ಸಹಾಯಧನ/ಸಾಧನ ಸಲಕರಣೆ ಪಡೆದಿರಬಾರದು. |
| 4 | **ವಿವಾಹ ಪ್ರೋತ್ಸಾಹ ಧನ**<br>ವಿಕಲಚೇತನ ಯುವಕ/ಯುವತಿಯರನ್ನು ವಿವಾಹವಾಗುವ ಸಾಮಾನ್ಯ ಯುವಕ/ ಯುವತಿಯರಿಗೆ ನಿರಂತರವಾಗಿ ಮಾಸಿಕ ಆದಾಯ ದೊರಕಿಸಲು ಜಂಟಿಯಾಗಿ ರೂ.50,000/- ಗಳನ್ನು ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ 5 ವರ್ಷಗಳ ಅವಧಿಗೆ ನಿಶ್ಚಿತ ಠೇವಣಿ ಇಡಲಾಗುವುದು. 05 ವರ್ಷಗಳ ನಂತರ ಠೇವಣಿ ಮೊತ್ತವನ್ನು ವಾಪಸ್ಸು ಪಡೆಯಬಹುದು ಅಥವಾ ಮುಂದುವರಿಸಬಹುದಾಗಿರುತ್ತದೆ. | 1. ವಿಕಲಚೇತನ ವ್ಯಕ್ತಿಗಳೊಡನೆ ವಿವಾಹವಾಗುವ ಸಾಮಾನ್ಯ ವ್ಯಕ್ತಿಗಳಿಗೆ ಯಾವುದೇ ಆದಾಯ ಮಿತಿ ಇರುವುದಿಲ್ಲ.<br>2. ವಿವಾಹವಾಗುವ ಯುವತಿಯರ ವಯಸ್ಸು 18 ಹಾಗೂ ಯುವಕರ ವಯಸ್ಸು 21 ವರ್ಷಕ್ಕಿಂತ ಮೇಲ್ಪಟ್ಟಿರಬೇಕು.<br>3. ವಿಕಲಚೇತನ ವ್ಯಕ್ತಿಗಳು/ಸಾಮಾನ್ಯ ವ್ಯಕ್ತಿಗಳು 2ನೇ ಮದುವೆ ಮಾಡಿಕೊಂಡಲ್ಲಿ ಈ ಸೌಲಭ್ಯ ಪಡೆಯಲು ಅರ್ಹರಿರುವುದಿಲ್ಲ.<br>4. ವಿಕಲಚೇತನರ ಯುವಕ/ಯುವತಿಯರ ವಿಕಲಚೇತನತೆಯ ಪ್ರಮಾಣ ಶೇ.40%ಕ್ಕಿಂತ ಹೆಚ್ಚಾಗಿರತಕ್ಕದ್ದು.<br>5. ವಿವಾಹವಾಗುವ ಯುವಕ/ಯುವತಿಯರು ಕಡ್ಡಾಯವಾಗಿ ಸಂಬಂಧಪಟ್ಟವರಿಂದ ಪಡೆದ ವಾಸಸ್ಥಳ ದೃಢೀಕರಣ ಪತ್ರ ನೀಡತಕ್ಕದ್ದು. |

| | | |
|---|---|---|
| 5 | **ಸಾಧನೆ**<br>ಈ ಯೋಜನೆಯ ಅಡಿಯಲ್ಲಿ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದ ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸಿದ ಕ್ರೀಡಾ ಪಟುಗಳಿಗೆ ಧನಸಹಾಯ ನೀಡಲಾಗುವುದು. | 1. ಕ್ರೀಡೆಯಲ್ಲಿ ಭಾಗವಹಿಸಿದ ನಂತರ, ಭಾಗವಹಿಸಲು ಆಹ್ವಾನಿಸಿರುವ ಮಾಹಿತಿ ಹಾಗೂ ಪ್ರಯಾಣದ ವೆಚ್ಚದ ಹಾಗೂ ಇತರ ವೆಚ್ಚದ ಮೂಲ ದಾಖಲಾತಿಗಳೊಂದಿಗೆ ಪ್ರಸ್ತಾವನೆ ಸಲ್ಲಿಸತಕ್ಕದ್ದು.<br>2. ಪ್ರಸ್ತಾವನೆ ಪರಿಶೀಲಿಸಿದ ನಂತರ ಸಹಾಯಧನವನ್ನು ಮಂಜೂರು ಮಾಡಲಾಗುವುದು. |
| | **ಪ್ರತಿಭೆ**<br>ಅಂಗವಿಕಲರ ಕ್ಷೇಮಾಭಿವೃದ್ಧಿ ಕಾರ್ಯಕ್ರಮಗಳಲ್ಲಿ ತೊಡಗಿರುವ ಸ್ವಯಂ ಸೇವಾ ಸಂಸ್ಥೆಗಳು, ನೋಂದಾಯಿತ ಸಾಂಸ್ಕೃತಿಕ ಸ್ವಯಂ ಸೇವಾ ಸಂಸ್ಥೆಗಳು ಅಂಗವಿಕಲ ಕಲಾವಿದರನ್ನು ಒಳಗೊಂಡು ಏರ್ಪಡಿಸುವ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಮತ್ತು ವಿಕಲಚೇತನರು ವೈಯಕ್ತಿಕವಾಗಿ ನೀಡುವ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಸಹಾಯಧನ ನೀಡುವ ಯೋಜನೆಯಾಗಿದೆ. | 1. ಪ್ರಾಯೋಜಿತ ಕಾರ್ಯಕ್ರಮ ನೀಡುವ ಕಲಾವಿದರು ಅಲ್ಲವೇ ಪ್ರಾಯೋಜಿತ ಕಾರ್ಯಕ್ರಮಗಳನ್ನು ಪಡೆಯಲು ಉದ್ದೇಶಿಸಿರುವ ನೊಂದಾಯಿತ ಸಂಸ್ಥೆ ಕಲಾವಿದರು ಹಾಗೂ ಕಾರ್ಯಕ್ರಮದ ಕುರಿತು ಎಲ್ಲಾ ವಿವರಗಳೊಂದಿಗೆ ಸಂಬಂಧಪಟ್ಟ ಜಿಲ್ಲೆಯ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಕನಿಷ್ಠ 1 ತಿಂಗಳ ಮೊದಲು ಅರ್ಜಿಯನ್ನು ಸಲ್ಲಿಸತಕ್ಕದ್ದು.<br>2. ಕಾರ್ಯಕ್ರಮ ನಡೆದಿರುವ ಬಗ್ಗೆ ಸೂಕ್ತ ವಿವರಗಳನ್ನು ಹಾಗೂ ಅಗತ್ಯವಿರುವ ದಾಖಲೆಗಳನ್ನು ಒದಗಿಸುವುದು. |
| 6 | **ಬುದ್ಧಿಮಾಂದ್ಯ ಮಕ್ಕಳ ಪೋಷಕರ ವಿಮಾ ಯೋಜನೆ**<br>ಬುದ್ಧಿಮಾಂದ್ಯ ವ್ಯಕ್ತಿಗಳ ತಂದೆ/ತಾಯಿ/ಪೋಷಕರ ಹೆಸರಲ್ಲಿ, ಭಾರತೀಯ ಜೀವ ವಿಮಾ ನಿಗಮಕ್ಕೆ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯದಿಂದ ವಾರ್ಷಿಕ ವಿಮಾ ಕಂತನ್ನು ಪಾವತಿ ಮಾಡಿ ವಿಮಾ ಸೌಲಭ್ಯವನ್ನು ಒದಗಿಸಲಾಗುತ್ತದೆ. ಬುದ್ಧಿಮಾಂದ್ಯ ವ್ಯಕ್ತಿಗಳ ತಂದೆ/ತಾಯಿ/ಪೋಷಕರಿಗೆ ಗರಿಷ್ಠ ರೂ.20,000/- ಗಳಿಗೆ ವಿಮೆ ಮಾಡಿಸಲಾಗುವುದು. | 1. ಬುದ್ಧಿಮಾಂದ್ಯ ವ್ಯಕ್ತಿಗಳ ತಂದೆ/ತಾಯಿ/ಪೋಷಕರು 18 ರಿಂದ 60 ವರ್ಷವರೆಗಿನ ವಯೋಮಿತಿಯವರಾಗಿರಬೇಕು.<br>2. ಕುಟುಂಬದ ವಾರ್ಷಿಕ ವರಮಾನ ಗ್ರಾಮೀಣ ಪ್ರದೇಶದಲ್ಲಿ ರೂ 11,500/- ಮತ್ತು ನಗರ ಪ್ರದೇಶಗಳಲ್ಲಿ ರೂ.24,000/-ಗಳನ್ನು ಮೀರಿರಬಾರದು.<br>3. ಬುದ್ಧಿಮಾಂದ್ಯತೆ ಬಗ್ಗೆ ತಜ್ಞ ವೈದ್ಯಾಧಿಕಾರಿಗಳಿಂದ ಪ್ರಮಾಣ ಪತ್ರ ಪಡೆದಿರಬೇಕು. |
| 7 | **ನಿರಾಮಯ**<br>ಕೇಂದ್ರ ಸರ್ಕಾರದ ನ್ಯಾಷನಲ್ ಟ್ರಸ್ಟ್-1999 ಅಧಿನಿಯಮದಡಿ ಬರುವ 04 ಬಗೆಯ ವಿಕಲಚೇತನರಿಗೆ (ಬುದ್ಧಿಮಾಂದ್ಯರು, ಸೆರಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲರು) "ನಿರಾಮಯ" ಆರೋಗ್ಯ ವಿಮಾ ಯೋಜನೆ ಯನ್ನು ಜಾರಿಗೆ ತಂದಿದ್ದು, ಸದರಿ ಯೋಜನೆ ಯನ್ವಯ ಕರ್ನಾಟಕ ರಾಜ್ಯದಲ್ಲಿ ಬಡತನ ರೇಖೆಗಿಂತ ಕೆಳಗಿರುವ ಕುಟುಂಬದ 04 ಬಗೆಯ ವಿಕಲಚೇತನ ವ್ಯಕ್ತಿಗಳಿಗೆ ಪ್ರಥಮ ಬಾರಿ ಒಂದುಸಲ ವಾರ್ಷಿಕ ರೂ.250/-ಗಳನ್ನು ಸರ್ಕಾರದ ವತಿಯಿಂದ ವಿಮಾ ಕಂತಾಗಿ ಪಾವತಿಸಿ ಪ್ರತಿ ವರ್ಷ ರೂ.1.00 ಲಕ್ಷದವರೆಗೆ ವೈದ್ಯಕೀಯ ಸೌಲಭ್ಯ ಪಡೆಯಲು ಅವಕಾಶ ಕಲ್ಪಿಸಲಾಗಿದೆ.<br>ಈ ಯೋಜನೆಯನ್ನು ರಾಜ್ಯದಲ್ಲಿ ಕೇಂದ್ರ ಸರ್ಕಾರದ ನ್ಯಾಷನಲ್ ಟ್ರಸ್ಟ್ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ. | 1. ಕರ್ನಾಟಕ ರಾಜ್ಯಾದ್ಯಾಂತ ಕೇಂದ್ರ ಸರ್ಕಾರದ ನ್ಯಾಷನಲ್ ಟ್ರಸ್ಟ್-1999 ಆಕ್ಟ್‌ನಡಿ ಬರುವ 04 ಬಗೆಯ ವಿಕಲಚೇತನರು ಅರ್ಹರಿರುತ್ತಾರೆ. (ಬುದ್ಧಿಮಾಂದ್ಯರು, ಸೆರಬ್ರಲ್ ಪಾಲ್ಸಿ, ಆಟಿಸಂ, ಮತ್ತು ಬಹುವಿಧ ಅಂಗವಿಕಲರು)<br>2. ಬಡತನ ರೇಖೆಗಿಂತ ಕೆಳಗಿರುವ ವಿಕಲಚೇತನರು ಅರ್ಹರಿರುತ್ತಾರೆ. |
| 8 | **ಸಮಾಜಸೇವಾ ಸಂಕೀರ್ಣ** ನಿರ್ಗತಿಕ ಪುರುಷ ಬುದ್ಧಿಮಾಂದ್ಯರಿಗೆ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ ಸಂರಕ್ಷಣೆ ಒದಗಿಸುವ ಉದ್ದೇಶದಿಂದ ಸಮಾಜ ಸೇವಾ ಸಂಕೀರ್ಣವನ್ನು ಬೆಂಗಳೂರಿನಲ್ಲಿ ಸ್ಥಾಪಿಸಲಾಗಿದೆ. ಗರಿಷ್ಠ 100 ನಿವಾಸಿಗಳಿಗೆ ಪುನರ್ವಸತಿ ಕಲ್ಪಿಸುವ ಅವಕಾಶ ಹೊಂದಿರುತ್ತದೆ. | 1. 18 ವರ್ಷಕ್ಕಿಂತ ಮೇಲ್ಪಟ್ಟ ಪೋಷಕರಿಲ್ಲದ ಪುರುಷ ಬುದ್ಧಿಮಾಂದ್ಯ ವ್ಯಕ್ತಿಗಳನ್ನು ದಾಖಲು ಮಾಡಿಕೊಳ್ಳಲಾಗುವುದು.<br>2. ಸದರಿ ವ್ಯಕ್ತಿಗಳು ನಿಮ್ಹಾನ್ಸ ಅಥವಾ ತತ್ಸಮಾನ ಸಂಸ್ಥೆಗಳಿಂದ ಬುದ್ಧಿಮಾಂದ್ಯತೆ ಬಗ್ಗೆ ದೃಢೀಕರಣ ಪತ್ರ ಹೊಂದಿರಬೇಕು.<br>3. ನ್ಯಾಯಾಲಯದ ಆದೇಶದ ಮೇರೆಗೆ ಬರುವಂತಹ ಬುದ್ಧಿಮಾಂದ್ಯ ವ್ಯಕ್ತಿಗಳನ್ನು ದಾಖಲಿಸಿಕೊಳ್ಳಲಾಗುವುದು.<br>4. ಇತರೆ ಸರ್ಕಾರಿ ಸಮಸ್ಥೆಗಳಿಂದ ವರ್ಗಾವಣೆ ಆದತಂಹ ವ್ಯಕ್ತಿಗಳನ್ನು ಸಹ ದಾಖಲಿಸಿ ಕೊಳ್ಳಲಾಗುವುದು. |
| 9 | **ಮಂದಮತಿ ಅನುಪಾಲನಾ ಗೃಹ** ನಿರ್ಗತಿಕ ಮಹಿಳಾ ಬುದ್ಧಿಮಾಂದ್ಯರಿಗೆ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ, ಸಂರಕ್ಷಣೆ ಒದಗಿಸುವ ಉದ್ದೇಶದಿಂದ ಮಂದಮತಿ ಮಹಿಳೆಯರ ಅನುಪಾಲನಾ ಗೃಹಗಳನ್ನು ರಾಜ್ಯದ ಬೆಂಗಳೂರು ಮತ್ತು ಹುಬ್ಬಳ್ಳಿಯಲ್ಲಿ ನಡೆಸಲಾಗುತ್ತಿದೆ. ಬೆಂಗಳೂರಿನ ಅನುಪಾಲನಾ ಗೃಹದಲ್ಲಿ ಹಾಲಿ 100 ನಿವಾಸಿಗಳನ್ನು, ಹುಬ್ಬಳ್ಳಿಯ ಅನುಪಾಲನಾ ಗೃಹದಲ್ಲಿ ಹಾಲಿ 50 ನಿವಾಸಿಗಳನ್ನು ದಾಖಲಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. | 1. 18 ವರ್ಷಕ್ಕಿಂತ ಮೇಲ್ಪಟ್ಟ ಪೋಷಕರಿಲ್ಲದ ಬುದ್ಧಿಮಾಂದ್ಯ ಮಹಿಳೆಯರನ್ನು ದಾಖಲು ಮಾಡಿಕೊಳ್ಳಲಾಗುವುದು.<br>2. ಸದರಿ ವ್ಯಕ್ತಿಗಳು ನಿಮ್ಹಾನ್ಸ ಅಥವಾ ತತ್ಸಮಾನ ಸಂಸ್ಥೆಗಳಿಂದ ಬುದ್ಧಿಮಾಂದ್ಯತೆ ಬಗ್ಗೆ ದೃಢೀಕರಣ ಪತ್ರ ಹೊಂದಿರಬೇಕು.<br>3. ನ್ಯಾಯಾಲಯದ ಆದೇಶದ ಮೇರೆಗೆ ಬರುವಂತಹ ಬುದ್ಧಿಮಾಂದ್ಯ ವ್ಯಕ್ತಿಗಳನ್ನು ದಾಖಲಿಸಿಕೊಳ್ಳಲಾಗುವುದು.<br>4. ಇತರೆ ಸರ್ಕಾರಿ ಸಂಸ್ಥೆಗಳಿಂದ ವರ್ಗಾವಣೆ ಆದಂತಹ ಮಹಿಳೆಯರನ್ನು ಸಹ ದಾಖಲಿಸಿ ಕೊಳ್ಳಲಾಗುವುದು. |

| | | |
|---|---|---|
| 10 | **1982ರ ಅನುದಾನ ಸಂಹಿತೆಯಡಿ ವಿಶೇಷ ಶಾಲೆಗಳು**<br><br>ವಿವಿಧ ವಿಕಲಚೇತನ ಮಕ್ಕಳಿಗೆ ಉಚಿತ ವಿದ್ಯಾಭ್ಯಾಸ, ಊಟ, ವಸತಿ ಮತ್ತು ಶೈಕ್ಷಣಿಕ ಸೌಲಭ್ಯಗಳನ್ನು ಕಲ್ಪಿಸಿ ಸಮಾಜದಲ್ಲಿ ಇತರೆ ಮಕ್ಕಳಂತೆ ವಿದ್ಯಾಭ್ಯಾಸವನ್ನು ಒದಗಿಸಲು ಉದ್ದೇಶಿಸಿರುವ ಸ್ವಯಂ ಸೇವಾ ಸಂಸ್ಥೆಗಳಿಗೆ ರಾಜ್ಯ ಸರ್ಕಾರವು ಜಿಲ್ಲಾ ಪಂಚಾಯಿತಿ ಮೂಲಕ ಧನ ಸಹಾಯ ನೀಡುವ ಯೋಜನೆ. | 1. ಭಾರತದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಪ್ರಕಾರ ನೊಂದಣಿಯಾಗಿರುವ ಚಾರಿಟಬಲ್ ಟ್ರಸ್ಟ್ ಸೊಸೈಟಿ ಅಥವಾ ಸಮಾಜಸೇವೆಯಲ್ಲಿ ತೊಡಗಿರುವ ಹಾಗೂ ಅಂಗವಿಕಲರ ಕಾಯ್ದೆ-1995 ಸಕ್ಷನ್ 50, 51 ರಂತೆ ನೊಂದಣಿ ಮಾಡಿಸಿರುವ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವಿಶೇಷ ಶಾಲೆಗಳನ್ನು ನಡೆಸಲಾಗುತ್ತಿದೆ.<br>2. ಸ್ವಯಂ ಸೇವಾ ಸಂಸ್ಥೆಯು ಸಾಕಷ್ಟು ಸಿಬ್ಬಂದಿ ವರ್ಗದೊಂದಿಗೆ ಅಗತ್ಯವಾದ ಮೂಲ ಸೌಲಭ್ಯ ಸಂಪನ್ಮೂಲ ಹಾಗೂ ಅನುಭವ ಮತ್ತು ಆರ್ಥಿಕವಾಗಿ ಸದೃಢವಾಗಿರಬೇಕು ಹಾಗೂ ಶಾಲೆಯನ್ನು ನಡೆಸುವಲ್ಲಿ ಅನುಭವ ಹೊಂದಿರಬೇಕು.<br>3. ಈ ಶಾಲೆಗಳಲ್ಲಿ ಅಂಧ ಮತ್ತು ಶ್ರವಣದೋಷ ವಿಶೇಷ ಶಾಲೆಗಳಲ್ಲಿ 1 ರಿಂದ 10 ನೇ ತರಗತಿಯವರೆಗೆ ವಿಕಲಚೇತನ ಮಕ್ಕಳು ವ್ಯಾಸಂಗ ಮಾಡಲು ಅವಕಾಶವಿರುತ್ತದೆ.<br>4. ಈ ಶಾಲೆಗಳಲ್ಲಿ ಉಚಿತ ಶಿಕ್ಷಣ ನೀಡಲಾಗುತ್ತದೆ.<br>5. ಬುದ್ಧಿಮಾಂದ್ಯ ಮಕ್ಕಳಿಗೆ ಪ್ರತ್ಯೇಕ ವಿಶೇಷ ಶಾಲೆಗಳನ್ನು ನಡೆಸಲಾಗುತ್ತದೆ.<br>6. ಸ್ವಯಂ ಸೇವಾ ಸಂಸ್ಥೆಯು ಶಾಲೆಯನ್ನು ನಡೆಸುವಲ್ಲಿ ಅಥವಾ ಇಂತಹುದೇ ಇನ್ನಿತರ ಕಾರ್ಯಕ್ರಮಗಳನ್ನು ನಡೆಸುವಲ್ಲಿ ಅನುಭವ ಹೊಂದಿರಬೇಕು. |
| 11 | **ಅಂಗವಿಕಲ ಮಕ್ಕಳ ಶಿಶು ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ**<br>ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸುತ್ತಿರುವ ವಿಶೇಷ ಶಾಲೆಗಳಿಗೆ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಸಹಾಯ ಧನ ನೀಡುವ ಯೋಜನೆಯಾಗಿದೆ. ಸದರಿ ಯೋಜನೆಯು ಎಲ್ಲಾ ವಿಧದ ವಿಕಲಚೇತನ ಮಕ್ಕಳಿಗೆ ವ್ಯಾಸಂಗ ಮಾಡಲು ಪ್ರತ್ಯೇಕವಾಗಿ ಅಂಗವಿಕಲತೆಯ ಅನುಸಾರ ವಿಶೇಷ ಶಾಲೆಗಳನ್ನು ನಡೆಸಲು ಅವಕಾಶ ಮಾಡಿಕೊಡಲಾಗಿದೆ. | 1. ಭಾರತದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಪ್ರಕಾರ ನೊಂದಣಿಯಾಗಿರುವ ಚಾರಿಟಬಲ್ ಟ್ರಸ್ಟ್ ಸೊಸೈಟಿ ಅಥವಾ ಸಮಾಜಸೇವೆಯಲ್ಲಿ ತೊಡಗಿರುವ ಹಾಗೂ ಅಂಗವಿಕಲರ ಕಾಯ್ದೆ-1995 ಸಕ್ಷನ್ 50, 51 ರಂತೆ ನೊಂದಣಿ ಮಾಡಿಸಿರುವ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವಿಶೇಷ ಶಾಲೆಗಳನ್ನು ನಡೆಸಲಾಗುತ್ತಿದೆ.<br>2. ಸ್ವಯಂ ಸೇವಾ ಸಂಸ್ಥೆಯು ಸಾಕಷ್ಟು ಸಿಬ್ಬಂದಿ ವರ್ಗದೊಂದಿಗೆ ಅಗತ್ಯವಾದ ಮೂಲ ಸೌಲಭ್ಯ ಸಂಪನ್ಮೂಲ ಹಾಗೂ ಅನುಭವ ಮತ್ತು ಆರ್ಥಿಕವಾಗಿ ಸದೃಢವಾಗಿರಬೇಕು ಹಾಗೂ ಶಾಲೆಯನ್ನು ನಡೆಸುವಲ್ಲಿ ಅನುಭವ ಹೊಂದಿರಬೇಕು.<br>3. ಈ ಶಾಲೆಗಳಲ್ಲಿ ಅಂಧ ಮತ್ತು ಶ್ರವಣದೋಷ ವಿಶೇಷ ಶಾಲೆಗಳಲ್ಲಿ 1 ರಿಂದ 10 ನೇ ತರಗತಿಯವರೆಗೆ ವಿಕಲಚೇತನ ಮಕ್ಕಳು ವ್ಯಾಸಂಗ ಮಾಡಲು ಅವಕಾಶವಿರುತ್ತದೆ.<br>4. ಈ ಶಾಲೆಗಳಲ್ಲಿ ಉಚಿತ ಶಿಕ್ಷಣ ನೀಡಲಾಗುತ್ತದೆ.<br>5. ಬುದ್ಧಿಮಾಂದ್ಯ ಮಕ್ಕಳಿಗೆ ಪ್ರತ್ಯೇಕ ವಿಶೇಷ ಶಾಲೆಗಳನ್ನು ನಡೆಸಲಾಗುತ್ತದೆ.<br>6. ಸ್ವಯಂ ಸೇವಾ ಸಂಸ್ಥೆಯು ಶಾಲೆಯನ್ನು ನಡೆಸುವಲ್ಲಿ ಅಥವಾ ಇಂತಹುದೇ ಇನ್ನಿತರ ಕಾರ್ಯಕ್ರಮಗಳನ್ನು ನಡೆಸುವಲ್ಲಿ ಅನುಭವ ಹೊಂದಿರಬೇಕು.<br>7. ಶಾಲೆಯಲ್ಲಿ ಕನಿಷ್ಠ 25 ಅಂಗವಿಕಲ ವಿದ್ಯಾರ್ಥಿಗಳು ದಾಖಲಾಗಿರಬೇಕು. |
| 12 | **ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಮಕ್ಕಳ ಹಗಲು ಯೋಗಕ್ಷೇಮ ಕೇಂದ್ರಗಳು**<br>3 ವರ್ಷಕ್ಕಿಂತ ಮೇಲ್ಪಟ್ಟ ವಯೋಮಾನದ ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಹಾಗೂ ತೀವ್ರತರನಾದ ಬುದ್ಧಿಮಾಂದ್ಯರ ಪಾಲನೆಗಾಗಿ ಬೆಂಗಳೂರು ನಗರದಲ್ಲಿ 02 ಹಗಲು ಯೋಗಕ್ಷೇಮ ಕೇಂದ್ರಗಳನ್ನು ನಡೆಸಲಾಗುತ್ತಿದೆ. ಅನುದಾನವನ್ನು ಮಕ್ಕಳ ಸಂಖ್ಯೆಯನ್ನು ಆಧಾರಿಸಿ ನೀಡಲಾಗುತ್ತದೆ. | 1. ಬೆಂಗಳೂರು ನಗರದ 6 ರಿಂದ 18 ವರ್ಷಕ್ಕಿಂತ ಮೇಲ್ಪಟ್ಟ ಮಯೋಮಾನದ ಬುದ್ಧಿಮಾಂದ್ಯರು, ಸೆರಬ್ರಲ್ ಪಾಲ್ಸಿ, ಆಟಿಸಂ ಹಾಗೂ ತೀವ್ರತರನಾದ ವಿಕಲಚೇತನ ಮಕ್ಕಳಿಗೆ ಸೌಲಭ್ಯವನ್ನು ಒದಗಿಸಲಾಗುವುದು.<br>2. ಈ ಯೋಜನೆಯನ್ನು ಯಾವುದೇ ಆದಾಯಮಿತಿಗೆ ಒಳಪಡಿಸಿರುವುದಿಲ್ಲ.<br>ಪ್ರತಿ ಕೇಂದ್ರದಲ್ಲಿ 25 ಅಂಗವಿಕಲ ಮಕ್ಕಳು ಮಾತ್ರ ಇರಲು ಅವಕಾಶ ಕಲ್ಪಸಲಾಗಿದೆ.<br>4. ಇಲಾಖೆಯಿಂದ ಅನುಮತಿಯನ್ನು ಪಡೆದ ಸಂಸ್ಥೆಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.<br>5. ಈ ಶಾಲೆಗಳಲ್ಲಿ ಉಚಿತ ವಿದ್ಯಾಭ್ಯಾಸ ನೀಡಲಾಗುತ್ತಿದೆ. |

| | | |
|---|---|---|
| 13 | **ಮಾನಸ ಕೇಂದ್ರ**<br>ಮಾನಸಿಕ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದು ಗುಣಮುಖರಾದ ಮಾನಸಿಕ ಅಸ್ವಸ್ಥರಿಗೆ ತರಬೇತಿ ಹಾಗೂ ಆಪ್ತ ಸಮಾಲೋಚನೆ ನೀಡಿ ಪುನರ್ವಸತಿ ಕಲ್ಪಿಸಲಾಗುತ್ತದೆ. ಇವರಿಗೆ ಅವಶ್ಯಕವಾಗಿ ಬೇಕಾಗಿರುವ ಆರೋಗ್ಯ, ಪೋಷಣೆ ಮತ್ತು ಆಶ್ರಯವನ್ನು ಒದಗಿಸುವುದು. | 1. ಮಾನಸಿಕ ಅಸ್ವಸ್ಥರು ಅಂದರೆ ಅಂಗವಿಕಲರ ಅಧಿನಿಯಮ 1995ರಲ್ಲಿ ತಿಳಿಸಿರುವ ವ್ಯಾಖ್ಯಾನಕ್ಕೆ ಒಳಪಟ್ಟವರು.<br>2. ಫಲಾನುಭವಿಯು ಮಾನಸಿಕ ಅಸ್ವಸ್ಥರಾಗಿದ್ದು ಅವರ ಅಂಗವಿಕಲತೆಯು ಕನಿಷ್ಠ ಶೇಕಡ 40 ರಷ್ಟು ಇರತಕ್ಕದ್ದು.<br>3. ಫಲಾನುಭವಿಯ ಕೌಟುಂಬಿಕ ವಾರ್ಷಿಕ ಆದಾಯ ನಗರ ಪ್ರದೇಶಗಳಲ್ಲಿ 24,000 ಮತ್ತು ಗ್ರಾಮೀಣ ಪ್ರದೇಶದಲ್ಲಿ 11,500 ರೂಗಳಿಗಿಂತ ಕಡಿಮೆ ಇರತಕ್ಕದ್ದು.<br>4. ರಸ್ತೆಗಳಲ್ಲಿ ಓಡಾಡುವ **(Wandering)** ನಿರ್ಗತಿಕ ಮಾನಸಿಕ ಅಸ್ವಸ್ಥರನ್ನು ಈ ಕೇಂದ್ರಗಳಿಗೆ ಸೇರಿಸಿಕೊಳ್ಳಲಾಗುವುದು.<br>5. ರಾಜ್ಯ ಉಚ್ಚ ನ್ಯಾಯಾಲಯವು ಮತ್ತು ನ್ಯಾಯಾಲಯಗಳು ಆದೇಶಿಸುವ ಫಲಾನುಭವಿಗಳನ್ನು ಸಹ ಈ ಕೇಂದ್ರಗಳಿಗೆ ಸೇರಿಸಕೊಳ್ಳಲಾಗುವುದು. |
| 14 | **ವೈದ್ಯಕೀಯ ಪರಿಹಾರ**<br>ಅಂಗವಿಕಲತೆಯ ಪ್ರಮಾಣವನ್ನು ಕಡಿಮೆ ಮಾಡಿಕೊಳ್ಳಲು ಅಥವಾ ನಿವಾರಿಸುವ ಸಲುವಾಗಿ ಶಸ್ತ್ರಚಿಕಿತ್ಸೆಗೆ ಒಳಗಾಗುವ ವಿಕಲಚೇತನ ವ್ಯಕ್ತಿಗೆ ಶಸ್ತ್ರಚಿಕಿತ್ಸೆ/ ಔಷಧಿ/ವೈದ್ಯಕೀಯ ಪರೀಕ್ಷೆ/ ಬೆಡ್‌ಚಾರ್ಜ್‌ಗಳ ವೆಚ್ಚವನ್ನು ಭರಿಸಲು ಗರಿಷ್ಠ ರೂ.1.00ಲಕ್ಷಗಳವರೆಗೆ ಅನುದಾನವನ್ನು ನೀಡಲಾಗುವುದು. | 1. ಶಸ್ತ್ರ ಚಿಕಿತ್ಸೆಯಿಂದ ಅಂಗವಿಕಲತೆ ನಿವಾರಣೆಯಾಗುವ ಇಲ್ಲವೆ ಅಂಗವಿಕಲತೆಯ ಪ್ರಮಾಣ ಕಡಿಮೆಯಾಗುವ ಕುರಿತಂತೆ ತಜ್ಞ ವೈದ್ಯಾಧಿಕಾರಿಗಳಿಂದ ಪಡೆದ ದೃಢೀಕರಣ ಒದಗಿಸಬೇಕು.<br>2. ಮರುಪಾವತಿ ಪಡೆಯಲು, ಚಿಕಿತ್ಸೆಗೆ ಸಂಬಂಧಪಟ್ಟ ಔಷಧಿ ಖರೀದಿ, ಬೆಡ್ ಖರ್ಚು, ವೈದ್ಯಕೀಯ ಪರೀಕ್ಷೆಗಳ ವೆಚ್ಚ ಮತ್ತು ಶಸ್ತ್ರಚಿಕಿತ್ಸೆಗೆ ತಗಲುವ ವೆಚ್ಚದ ರಸೀದಿ ಒದಗಿಸಬೇಕು |